# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಶನಿವಾರ, ೧೮, ಜೂನ್, ೨೦೨೨ (ಜ್ಯೇಷ್ಠ, ೨೮, ಶಕವರ್ಷ, ೧೯೪೪)<br>BENGALURU, SATURDAY, 18, JUNE, 2022 ( JYEISHTA, 28, SHAKAVARSHA, 1944) | ನಂ. ೩೪೮<br>No. 348 |
|---|---|---|


## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** **"777 ಚಾರ್ಲಿ"** ಶೀರ್ಷಿಕೆಯ ಕನ್ನಡ ಚಲನಚಿತ್ರ ಮೇಲಿನ ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್‌ಜಿಎಸ್‌ಟಿ) ಮೊತ್ತವನ್ನು ಪ್ರದರ್ಶಕರಿಗೆ ಹಿಂಪಾವತಿ ಮಾಡುವ ಮೂಲಕ ಸದರಿ ಚಲನಚಿತ್ರ ವೀಕ್ಷಕರಿಗೆ ವಿನಾಯಿತಿ ನೀಡುವ ಕುರಿತು.

**ಪ್ರಸ್ತಾವನೆ :**

ಶ್ರೀ ರಕ್ಷಿತ್ ಶೆಟ್ಟಿ, ನಿರ್ಮಾಪಕರು, ಪರಂವಃ ಸ್ಟುಡಿಯೋಸ್, ನಂ.276, 2ನೇ ಮಹಡಿ, 3ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಎಸ್‌ಆರ್‌ಆರ್ ಲೇಔಟ್, ನಾಗದೇವನಹಳ್ಳಿ, ಜ್ಞಾನಭಾರತಿ ಅಂಚೆ, ಬೆಂಗಳೂರು – 560056, ಇವರು ದಿನಾಂಕ: 14–06–2022ರಂದು ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರ ಬರೆದು, ಕರ್ನಾಟಕ ರಾಜ್ಯದಲ್ಲಿ ಪ್ರದರ್ಶನಗೊಳ್ಳುತ್ತಿರುವ **"777 ಚಾರ್ಲಿ"** (777 **Charlie**) ಕನ್ನಡ ಚಲನಚಿತ್ರಕ್ಕೆ ಶೇಕಡ 100ರಷ್ಟು ತೆರಿಗೆ ವಿನಾಯಿತಿ ಕಲ್ಪಿಸುವಂತೆ ಮನವಿ ಮಾಡಿರುತ್ತಾರೆ. ಸದರಿ ಮನವಿ ಪತ್ರದಲ್ಲಿ ಇನ್‌ಬ್ರೀಡಿಂಗ್‌ನಿಂದಾಗಿ ಶ್ವಾನಗಳ ಸ್ವಾಸ್ಥ್ಯದ ಮೇಲಾಗುವ ಪರಿಣಾಮದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಪ್ರಾಣಿ ಹಿಂಸೆಯ ಸೂಕ್ಷ್ಮತೆಗಳನ್ನು ಎತ್ತಿಹಿಡಿಯುವ ಆಶಯ ಈ ಚಿತ್ರದ ಕಥಾಹಂದರದಲ್ಲಿ ಒಳಗೊಂಡಿದ್ದು, ಇದರ ಜೊತೆಗೆ ಈ ಚಿತ್ರವು ಬೀದಿ ನಾಯಿಗಳನ್ನು ದತ್ತು ಪಡೆಯುವುದರ ಬಗ್ಗೆ ಸಂದೇಶವನ್ನು ಸಾರುತ್ತದೆ ಎಂದು ತಿಳಿಸಿರುತ್ತಾರೆ.

2. ಮಾನ್ಯ ಮುಖ್ಯಮಂತ್ರಿಗಳು ಸದರಿ ಮನವಿಯನ್ನು ಪರಿಗಣಿಸಿ, ಈ ಚಿತ್ರವನ್ನು ತೆರಿಗೆ ಮುಕ್ತಗೊಳಿಸಿದರೆ, ದೇಶದ ಇನ್ನಷ್ಟು ಜನರಿಗೆ ಈ ಸಂದೇಶವನ್ನು ಮುಟ್ಟಿಸುವಲ್ಲಿ ಸಹಕಾರಿಯಾಗುವುದರಿಂದ ಸೂಕ್ತ ಆದೇಶ ಹೊರಡಿಸುವಂತೆ ನಿರ್ದೇಶನ ನೀಡಿರುತ್ತಾರೆ.

3. ಆದ್ದರಿಂದ, ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಆಇ 41 ಸಿಎಸ್‌ಎಲ್ 2022, ಬೆಂಗಳೂರು, ದಿನಾಂಕ: 18.06.2022.**

ಕರ್ನಾಟಕ ರಾಜ್ಯದಾದ್ಯಂತ ಚಲನಚಿತ್ರ ಮಂದಿರಗಳು / ಮಲ್ಟಿಪ್ಲೆಕ್ಸ್‌ಗಳಲ್ಲಿ ಪ್ರದರ್ಶನಗೊಳ್ಳುತ್ತಿರುವ "777 ಚಾರ್ಲಿ" ಎಂಬ ಶೀರ್ಷಿಕೆಯುಳ್ಳ ಕನ್ನಡ ಚಲನಚಿತ್ರ ಪ್ರದರ್ಶನಗಳಿಗೆ **ದಿನಾಂಕ: 19–06–2022**ರಿಂದ ಆರು ತಿಂಗಳ ಅವಧಿಗೆ ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್‌ಜಿಎಸ್‌ಟಿ) ಹಿಂಪಾವತಿ ಸೌಲಭ್ಯವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸರ್ಕಾರವು ನೀಡಿರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



(ಎ) ಪ್ರದರ್ಶಕರು ಸಿನೆಮಾ ಟಿಕೆಟ್ ಮೇಲೆ ಎಸ್‌ಜಿಎಸ್‌ಟಿ ವಿಧಿಸತಕ್ಕದ್ದಲ್ಲ ಮತ್ತು ಸಂಗ್ರಹಿಸತಕ್ಕದ್ದಲ್ಲ ಹಾಗೂ ಎಸ್‌ಜಿಎಸ್‌ಟಿ ಮೊತ್ತವನ್ನು ಕಡಿತಗೊಳಿಸಿದ ದರದಲ್ಲಿಯೇ ಟಿಕೆಟ್‌ಗಳನ್ನು ಮಾರಾಟ ಮಾಡತಕ್ಕದ್ದು.

(ಬಿ) ಸರ್ಕಾರದ ಆದೇಶವು ಜಾರಿಯಲ್ಲಿರುವ ಅವಧಿಯಲ್ಲಿ "777 ಚಾರ್ಲಿ" ಸಿನೆಮಾ ಪ್ರದರ್ಶನದ ಪ್ರವೇಶಕ್ಕೆ ಮಾರಾಟ ಮಾಡುವ ಟಿಕೆಟ್‌ಗಳ ಮೇಲೆ **"ಕರ್ನಾಟಕ ಸರ್ಕಾರದ ಆದೇಶದನ್ವಯ ರಾಜ್ಯ ಜಿಎಸ್‌ಟಿಯನ್ನು ಸಂಗ್ರಹಿಸಿರುವುದಿಲ್ಲ"** ಎಂಬ ಪದಗಳು ಪ್ರಮುಖವಾಗಿ ಎದ್ದು ಕಾಣುವಂತೆ ಇರತಕ್ಕದ್ದು.

(ಸಿ) ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್‌ಜಿಎಸ್‌ಟಿ)ನ್ನು ಪ್ರವೇಶ ಶುಲ್ಕದ ಮೇಲೆ ವಿಧಿಸದೆ ಮತ್ತು ಗ್ರಾಹಕರಿಂದ ಸಂಗ್ರಹಿಸದಿದ್ದರೂ, ಸಿನೆಮಾ ಮಂದಿರ / ಮಲ್ಟಿಪ್ಲೆಕ್ಸ್ ಪ್ರದರ್ಶಕರು ತೆರಿಗೆ ನಮೂನೆಯನ್ನು ಸಲ್ಲಿಸಿ, ಇತರೆ ಸಿನೆಮಾಗಳಿಗೆ ಜಮೆ ಮಾಡುವ ರೀತಿಯಲ್ಲೇ ತಮ್ಮ ಸಂಪನ್ಮೂಲದಿಂದಲೇ ರಾಜ್ಯ ಜಿಎಸ್‌ಟಿ ಮೊತ್ತವನ್ನು ಜಮೆ ಮಾಡತಕ್ಕದ್ದು.

(ಡಿ) ಕಂಡಿಕೆ (ಸಿ) ಅನ್ವಯ ಪಾವತಿಸಿದ ಎಸ್‌ಜಿಎಸ್‌ಟಿ ಮೊತ್ತವನ್ನು ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ನಿಗದಿಪಡಿಸಿದ ನಮೂನೆಯಲ್ಲಿ ವ್ಯಾಪ್ತಿಹೊಂದಿದ ಸ್ಥಳೀಯ ಜಿಎಸ್‌ಟಿ ಕಛೇರಿ / ಉಪ ಜಿಎಸ್‌ಟಿ ಕಛೇರಿಗೆ ಅರ್ಜಿ ಸಲ್ಲಿಸಿ ಹಿಂಪಾವತಿಗೆ ಕ್ಲೇಮು ಮಾಡತಕ್ಕದ್ದು.

(ಇ) ಯುಕ್ತ ಅಧಿಕಾರಿಯು (ವ್ಯಾಪ್ತಿ ಹೊಂದಿದ ಸ್ಥಳೀಯ ಜಿಎಸ್‌ಟಿ ಅಧಿಕಾರಿ / ಉಪ ಜಿಎಸ್‌ಟಿ ಅಧಿಕಾರಿ) ತಮ್ಮ ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಜಂಟಿ ಆಯುಕ್ತರ ಮೂಲಕ ಹಿಂಪಾವತಿಗೆ ಅರ್ಹವಾದ ಮೊತ್ತದ ದೃಢೀಕರಣಕ್ಕಾಗಿ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ಇವರಿಗೆ ಶಿಫಾರಸ್ಸು ಮಾಡತಕ್ಕದ್ದು.

(ಎಫ್) ಪ್ರತಿ ಪ್ರದರ್ಶಕರಿಗೆ ಸಂಬಂಧಿಸಿದಂತೆ, ವಾಣಿಜ್ಯ ತೆರಿಗೆ ಆಯುಕ್ತರು, ಬೆಂಗಳೂರು ಇವರಿಂದ ಹಿಂಪಾವತಿಗೆ ದೃಢೀಕರಣಗೊಂಡ ಮೊತ್ತದ ವರದಿಯನ್ನು ಸ್ವೀಕರಿಸಿದ ನಂತರ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಇವರು ಬಟವಾಡೆಗೆ ವ್ಯವಸ್ಥೆ ಮಾಡತಕ್ಕದ್ದು.

(ಜಿ) ಈ ರೀತಿಯಾಗಿ ಹಿಂಪಾವತಿ ಮಾಡಲಾಗುವ ಮೊತ್ತವನ್ನು ಲೆಕ್ಕಶೀರ್ಷಿಕೆ 2220–01–105–0–01–ಚಲನಚಿತ್ರ ನಿರ್ಮಾಣ 106 (ಸಹಾಯಧನ) ಗೆ ಖರ್ಚು ಹಾಕತಕ್ಕದ್ದು.

(ಹೆಚ್) ಪ್ರದರ್ಶಕರು ಹಿಂಪಾವತಿ ಕ್ಲೇಮು ಮಾಡಲು ಅಗತ್ಯವಿರುವ ಕಾರ್ಯವಿಧಾನ ಕುರಿತು ವಾಣಿಜ್ಯ ತೆರಿಗೆ ಆಯುಕ್ತರು (ಕ), ಬೆಂಗಳೂರು, ಇವರು ಸುತ್ತೋಲೆ ಮೂಲಕ ಸೂಚನೆಗಳನ್ನು ನೀಡತಕ್ಕದ್ದು.

(ಹೆಚ್) ಈ ಆದೇಶದ ಜಾರಿಯಲ್ಲಿ ಯಾವುದೇ ತೊಂದರೆ ಉದ್ಭವಿಸಿದಲ್ಲಿ, ಅಂತಹ ತೊಂದರೆಯನ್ನು ನಿವಾರಿಸಲು ಅವಶ್ಯಕ ಅಥವಾ ಯುಕ್ತವಾದ ಸೂಚನೆಗಳನ್ನು ಸರ್ಕಾರವು ನೀಡಬಹುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕವಿತ ಎಲ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ವಾ.ತೆ–1).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE